

ANANDA Bhaskar
PRGI No: TNMUL/25/A1387
www.anandabhaskar.com
ಸಂಪುಟ: 02 ಸಂಚಿಕೆ: 202 06.11.2026 FREE EPAPER

ಗ್ರಾಮೀಣ ಸರ್ಕಾರಿ ಶಾಲೆಗಳನ್ನು ದತ್ತು ಪಡೆಯಿರಿ: ಖಾಸಗಿ ಶಾಲೆಗಳಿಗೆ ಡಿಕೆಶಿ ಮನವಿ

ಬನಸ್ಕಾಂತ

ಗ್ರಾಮೀಣ ಪ್ರದೇಶಗಳ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳು ಮುಂದೆ ಬಂದು ಶಾಲೆಗಳನ್ನು ದತ್ತು ಪಡೆಯಬೇಕು ಅಥವಾ ಅವುಗಳ ಅಭಿವೃದ್ಧಿಯಲ್ಲಿ ಸರ್ಕಾರದೊಂದಿಗೆ ಕೈಜೋಡಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಬುಧವಾರ ನಡೆದ 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಕಾರ್ಯಕ್ರಮ ಉದ್ಘಾಟಿಸಿ, ಖಾಸಗಿ ಶಾಲೆಗಳ ಆಡಳಿತ ಮಂಡಳಿಗಳ ಸಿಎಸ್ಆರ್ ಪ್ರತಿನಿಧಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಮೊದಲ ಹಂತದಲ್ಲಿ ರಾಜ್ಯದ 1,000 ಸರ್ಕಾರಿ ಶಾಲೆಗಳನ್ನು ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ ಸಂಪರ್ಕಿಸುವ ಗುರಿ ಹೊಂದಲಾಗಿದೆ. ಮುಂದಿನ ದಿನಗಳಲ್ಲಿ ಒಟ್ಟು 2,000 ಶಾಲೆಗಳನ್ನು ಈ ಯೋಜನೆಯ ವ್ಯಾಪ್ತಿಗೆ ತರಲು ಉದ್ದೇಶಿಸಲಾಗಿದೆ ಎಂದರು.

ರಾಜ್ಯದ 6,000 ಗ್ರಾಮ ಪಂಚಾಯಿತಿಗಳನ್ನು ಮೂರು ವಿಭಾಗಗಳಾಗಿ ವಿಂಗಡಿಸಿ ಯೋಜನೆ ಅನುಷ್ಠಾನಗೊಳಿಸಲಾಗುವುದು. ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಹಾಗೂ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಅವಕಾಶ ದೊರೆಯಬೇಕು. ಖಾಸಗಿ ಶಾಲೆಗಳ ಮಕ್ಕಳೊಂದಿಗೆ ಸರ್ಕಾರಿ ಶಾಲೆಗಳ ಮಕ್ಕಳನ್ನೂ ಬೆಳೆಸುವ ಜವಾಬ್ದಾರಿಯನ್ನು ಎಲ್ಲರೂ ಹಂಚಿಕೊಳ್ಳಬೇಕು ಎಂದು ಹೇಳಿದರು.

ಖಾಸಗಿ ಶಾಲೆಗಳು ತಮ್ಮ ಆರ್ಥಿಕ ಸಾಮರ್ಥ್ಯಕ್ಕೆ ಅನುಗುಣವಾಗಿ ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ₹5ರಿಂದ ₹10 ಕೋಟಿ ವೆಚ್ಚದಲ್ಲಿ ಕಟ್ಟಡ ನಿರ್ಮಿಸಲು ಸಾಧ್ಯವಾಗದಿದ್ದರೆ ತೊಂದರೆಯಿಲ್ಲ. ತಮ್ಮ ಶಾಲೆಗಳ ಪರಿಣತ ಶಿಕ್ಷಕರಲ್ಲಿ ಹತ್ತು ಮಂದಿಯನ್ನು ಸರ್ಕಾರಿ ಶಾಲೆಗಳಿಗೆ ಕಳುಹಿಸಿ, ಅವರ ವೇತನವನ್ನು ಖಾಸಗಿ ಸಂಸ್ಥೆಗಳೇ ಭರಿಸಬಹುದು. ಪ್ರಯೋಗಾಲಯ ಉಪಕರಣಗಳು, ಕಂಪ್ಯೂಟರ್‌ಗಳನ್ನು ಒದಗಿಸುವುದರ ಜೊತೆಗೆ ಬಳಕೆಯಲ್ಲಿಲ್ಲದ ಶಾಲಾ ಬಸ್‌ಗಳನ್ನು ಮಾರಾಟ ಮಾಡುವ ಬದಲು ಸರ್ಕಾರಿ ಶಾಲೆಗಳ ಮಕ್ಕಳಿಗೆ ನೀಡಬಹುದು ಎಂದು ಸಲಹೆ ನೀಡಿದರು.

ರಾಜ್ಯದಲ್ಲಿ ವಾರ್ಷಿಕ ₹8,800 ಕೋಟಿ ಸಿಎಸ್ಆರ್ ನಿಧಿ ಲಭ್ಯವಿದೆ. ಗ್ರಾಮೀಣ ಪ್ರಾಥಮಿಕ ಶಾಲೆಗಳ ಅಭಿವೃದ್ಧಿಗೆ ಈ ನಿಧಿಯನ್ನು ಆದ್ಯತೆಯಾಗಿ ಬಳಸುವಂತೆ ಕಂಪನಿಗಳೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ನೋಂದಣಿಯಾಗಿರುವ ಕಂಪನಿಗಳು ಇಲ್ಲಿ ಗಳಿಸಿದ ಹಣವನ್ನು ಬೇರೆ ರಾಜ್ಯಗಳಲ್ಲಿ ಬಳಸುವ ಪ್ರವೃತ್ತಿಗೆ ಕಡಿವಾಣ ಹಾಕುವಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೂ ಮನವಿ ಮಾಡಿರುವುದಾಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ 56 ಶಾಲೆಗಳ ಅಭಿವೃದ್ಧಿಗಾಗಿ 15 ಒಪ್ಪಂದಗಳಿಗೆ ಸಹಿ ಹಾಕಲಾಗಿದ್ದು, ಒಟ್ಟು ₹206.10 ಕೋಟಿ ಹೂಡಿಕೆ ಮಾಡಲು ನಿರ್ಧರಿಸಲಾಗಿದೆ. ಇದಕ್ಕೂ ಮೊದಲು 2026ರಲ್ಲಿ 33 ಶಾಲೆಗಳ ಅಭಿವೃದ್ಧಿಗೆ ₹85 ಕೋಟಿ ಮೊತ್ತದ 18 ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ. ಇನ್ನೂ 23 ಶಾಲೆಗಳ ಅಭಿವೃದ್ಧಿಗೆ ₹64 ಕೋಟಿ ಮೊತ್ತದ



12 ಒಪ್ಪಂದಗಳು ಅಂತಿಮ ಹಂತದಲ್ಲಿವೆ.

ರಾಮನಗರ ಜಿಲ್ಲೆಯಲ್ಲಿ ಟೊಯೊಟಾ ಸಂಸ್ಥೆಯ ನೆರವಿನಿಂದ 23 ಶಾಲೆಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಪ್ರತಿ ಶಾಲೆಗೆ ₹10ರಿಂದ ₹15 ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದು ಉದಾಹರಣೆ ನೀಡಿದರು. ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ನೆರವು ನೀಡುವ ಖಾಸಗಿ ಸಂಸ್ಥೆಗಳು ತಮ್ಮ ಹೆಸರನ್ನು ಶಾಲೆಯ ಹೆಸರಿನೊಂದಿಗೆ ಸೇರಿಸಿಕೊಳ್ಳಲು ಅವಕಾಶ ನೀಡಲಾಗುವುದು ಎಂದರು.

ಬೆಂಗಳೂರು ನಗರದಲ್ಲಿ ಶಿಕ್ಷಣ ಮತ್ತು ಉದ್ಯೋಗದ ಕಾರಣದಿಂದ ಜನಸಂಖ್ಯೆ ಹಾಗೂ ವಾಹನಗಳ ಸಂಖ್ಯೆ ಹೆಚ್ಚುತ್ತಿದ್ದು, ಗ್ರಾಮೀಣ ಪ್ರದೇಶಗಳಲ್ಲಿಯೇ ಗುಣಮಟ್ಟದ ಶಿಕ್ಷಣ ದೊರೆತರೆ ನಗರಗಳಿಗೆ ವಲಸೆ ಕಡಿಮೆಯಾಗಲಿದೆ ಎಂದು ಶಿವಕುಮಾರ್ ಅಭಿಪ್ರಾಯಪಟ್ಟರು. ಮುಂದಿನ ನಾಲ್ಕೈದು ವರ್ಷಗಳಲ್ಲಿ ಈ ಯೋಜನೆಯ ಉತ್ತಮ ಫಲಿತಾಂಶ ಕಾಣಬಹುದು ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಸರ್ಕಾರಿ ಶಾಲೆಗಳ ಅಭಿವೃದ್ಧಿಯಲ್ಲಿ ಸ್ಥಳೀಯ ಸಮುದಾಯ, ಹಳೆಯ ವಿದ್ಯಾರ್ಥಿಗಳು, ಶಿಕ್ಷಣ ತಜ್ಞರು ಹಾಗೂ ಗ್ರಾಮ ಪಂಚಾಯಿತಿಗಳ ಸಹಭಾಗಿತ್ವವೂ ಅಗತ್ಯವಾಗಿದೆ. ಶಾಲೆಗಳಿಗೆ ಮೂಲಸೌಕರ್ಯ ಒದಗಿಸುವುದಷ್ಟೇ ಅಲ್ಲದೆ, ಮಕ್ಕಳ ಕಲಿಕಾ ಗುಣಮಟ್ಟ, ಡಿಜಿಟಲ್ ಶಿಕ್ಷಣ, ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳು ಸಾಮಾಜಿಕ ಹೊಣೆಗಾರಿಕೆಯ ಭಾಗವಾಗಿ ಈ ಯೋಜನೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡರೆ ಗ್ರಾಮೀಣ ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ನೆರವಾಗಲಿದೆ ಎಂದು ಉಪಮುಖ್ಯಮಂತ್ರಿ ಆಶಯ ವ್ಯಕ್ತಪಡಿಸಿದರು.



